ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು	:	ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1119
ಉತ್ತರಿಸಬೇಕಾದ ದಿನಾಂಕ	:	22.12.2021.
ಉತ್ತರಿಸಬೇಕಾದ ಸಚಿವರು	:	ಮಾನ್ಯ ಪಶುಸಂಗೋಪನೆ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಪಶು ಸಂಗೋಪನಾ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗಿದೆಯೇ ಹಾಗಿದ್ದಲ್ಲಿ ವಿವರ ನೀಡುವುದು	ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಬೀದರ್ ಇಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಸರ್ಕಾರವು ಈಗಾಗಲೇ 616 (ಬೋಧಕ 390 ಮತ್ತು ಬೋಧಕೇತರ 226 ಹುದ್ದೆಗಳು) ಹುದ್ದೆಗಳಿಗೆ ದಿನಾಂಕ: 11.12.2019 ರಂದು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಿರುತ್ತದೆ. ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸುವ ಸಮಯದಲ್ಲಿ, ದೇಶಾದ್ಯಂತ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುವಿಕೆಯಿಂದ ಉಂಟಾದ ಆರ್ಥಿಕ ಸಂಕಷ್ಟದ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯು ಸುತ್ತೋಲೆಯನ್ನು ಹೊರಡಿಸಿ ಎಲ್ಲಾ ನೇಮಕಾತಿಗಳನ್ನು ಮುಂದಿನ ಆದೇಶದವರೆಗೆ ತಡೆಹಿಡಿದು ಆದೇಶ ಮಾಡಿರುತ್ತದೆ. ಪ್ರಸ್ತುತ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ವಿಶ್ವವಿದ್ಯಾಲಯಕ್ಕೆ ಅನುಮತಿ ನೀಡುವ ಕುರಿತಂತೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿರುತ್ತದೆ.
ಆ)	ಸದರಿ ವಿಶ್ವವಿದ್ಯಾಲಯದಲ್ಲಿ ಮಂಜೂರಾಗಿರುವ ಹುದ್ದೆಗಳೆಷ್ಟು ಈಗಾಗಲೇ ಭರ್ತಿ ಮಾಡಲಾದ ಹುದ್ದೆಗಳೆಷ್ಟು ಭರ್ತಿ ಮಾಡದೇ ಖಾಲಿ ಉಳಿದಿರುವ ಹುದ್ದೆಗಳೆಷ್ಟು ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುತ್ತುದೆ.	ಸದರಿ ವಿಶ್ವವಿದ್ಯಾಲಯದಲ್ಲಿ ಮಂಜೂರಾಗಿರುವ, ಭರ್ತಿ ಮಾಡಲಾದ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತದೆ. (see table below) ಸದರಿ ಹುದ್ದೆಗಳ ನೇಮಕಾತಿಗೆ ಆರ್ಥಿಕ ಇಲಾಖೆಯು ಅನುಮತಿ ನೀಡಿದ ತಕ್ಷಣ ನೇಮಕಾತಿ ಪ್ರಕ್ರಿಯೆನ್ನು ವಿಶ್ವವಿದ್ಯಾಲಯದಿಂದ ಪ್ರಾರಂಭಿಸಲು ಕ್ರಮವಹಿಸಲಾಗುವುದು.

ಹುದ್ದೆ	ಮಂಜೂರಾದ ಹುದ್ದೆ	ಭರ್ತಿ ಯಾದ ಹುದ್ದೆಗಳು	ಖಾಲಿ ಇರುವ ಹುದ್ದೆಗಳು
ಬೋಧಕ	715	245	470
ಬೋಧಕೇತರ	1106	284	822

ಪಸಂಮೀ ಇ-373 ಪಅಸೇ 2021

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ ಸಚಿವರು